ಕರ್ನಾಟಕ ಸರ್ಕಾರ
**ಸಾರ್ವಜನಿಕ ಶಿಕ್ಷಣ ಇಲಾಖೆ**
**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001**

ಸಂಖ್ಯೆ : ದೈಶಿ:ಸ್ವಾದಿ:ಶಾಲೆ:2020–21 ದಿನಾಂಕ : 12.08.2020

–: ಪರಿಷ್ಕೃತ ಸುತ್ತೋಲೆ :–

**ವಿಷಯ : ಆಗಸ್ಟ್ 15, 2020 ರಂದು ರಾಜ್ಯಾದ್ಯಂತ ಎಲ್ಲಾ ಶಾಲೆಗಳಲ್ಲಿ ಸ್ವಾತಂತ್ರ ದಿನಾಚರಣೆಯನ್ನು ಆಚರಿಸುವ ಕುರಿತು.**

**ಉಲ್ಲೇಖ : 1) ಸರ್ಕಾರದ ಆದೇಶ ಸಂಖ್ಯೆ ಆರ್‌ಡಿಇ 158 ಟಿಎನ್‌ಆರ್ 2020 ದಿನಾಂಕ : 30.07.2020.**

**2) ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 10.08.2020.**

– – –

ಉಲ್ಲೇಖ (2) ರ ಈ ಕಛೇರಿಯ ಸುತ್ತೋಲೆಯಲ್ಲಿ ದಿನಾಂಕ : 15.08.2020 ರಂದು ರಾಜ್ಯಾದ್ಯಂತ ಎಲ್ಲಾ ಶಾಲೆಗಳಲ್ಲಿ ಮುಖ್ಯ ಶಿಕ್ಷಕರು ಮತ್ತು ಸಹ ಶಿಕ್ಷಕರುಗಳು ಮಾತ್ರ ಶಾಲೆಗಳಿಗೆ ಹಾಜರಾಗಿ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಸೂಚಿಸಿರುವ ನಿರ್ದೇಶನಗಳನ್ನು ಪಾಲಿಸಿ, ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸರಳವಾಗಿ ಶಿಷ್ಟಾಚಾರದೊಂದಿಗೆ ಕಡ್ಡಾಯವಾಗಿ ಆಚರಿಸಲು ಸೂಚನೆ ನೀಡಲಾಗಿದೆ.

ಮುಂದುವರೆದು, ಸದರಿ ಸಮಾರಂಭದಲ್ಲಿ ಆಯಾ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಸಹ ಭಾಗವಹಿಸುವುದು. ಸಮಾರಂಭದಲ್ಲಿ ಸ್ಥಳೀಯ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪಾಲ್ಗೊಳ್ಳಲು ಇಚ್ಛಿಸಿದ್ದಲ್ಲಿ ಕೋವಿಡ್–19ರ ಎಲ್ಲಾ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಆಚರಿಸಲು ತಿಳಿಸಿದೆ.

12/8/20

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ಅಪರ ಆಯುಕ್ತರು, ಧಾರವಾಡ & ಗುಲ್ಬರ್ಗಾ, ಇವರುಗೆ ಕಳುಹಿಸುತ್ತಾ ತಮ್ಮ ವ್ಯಾಪ್ತಿಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಅಗತ್ಯ ಕ್ರಮ ವಹಿಸುವಂತೆ ಸೂಚಿಸುವುದು.
2) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ
3) ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
4) ರಾಜ್ಯದ ಎಲ್ಲಾ ಶಾಲೆಗಳು ಮುಖ್ಯ ಶಿಕ್ಷಕರುಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ) ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಗೌರವಪೂರ್ವಕವಾಗಿ :**

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಣ, ಬೆಂಗಳೂರು.